## ಕರ್ನಾಟಕ ಸರ್ಕಾರದ ನಡವಳಿಗಳು–

ವಿಷಯ : 2017–18ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ 4ನೇ ಕಂತಿನ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ : MGIRED ರವರ ಪತ್ರ ಸಂಖ್ಯೆ ಮಗಾಇ/ಅನುದಾನ/12/2017–18/598, ದಿನಾಂಕ 05.01.2018.

**ಪ್ರಸ್ತಾವನೆ :**

**2017–18**ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ (MGIRED) **ರೂ.202.00**ಲಕ್ಷಗಳನ್ನು ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಒದಗಿಸಿದ್ದು, ಈ ಪೈಕಿ ಈಗಾಗಲೇ ಮೂರು ಕಂತುಗಳಲ್ಲಿ ರೂ.151.50ಲಕ್ಷಗಳನ್ನು ಸಂಸ್ಥೆಗೆ ಬಿಡುಗಡೆ ಮಾಡಿದೆ.

ಮೇಲೆ ಓದಲಾದಂತೆ, ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರ ಕೋರಿಕೆಯನ್ವಯ, **2017–18**ನೇ ಸಾಲಿಗೆ ಸಂಬಂಧಿಸಿದಂತೆ 4ನೇ ಕಂತಿನ ಅನುದಾನ **ರೂ.50.50**ಲಕ್ಷಗಳನ್ನು ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಲೆಕ್ಕ ಶೀರ್ಷಿಕೆ **2501–04–105–0–02–059**ಯಡಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರಿಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/38/ಜೈಅಯೋ/2017(ಪಿ1) ಬೆಂಗಳೂರು,**
**ದಿನಾಂಕ.07.02.2018.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ **2017–18**ನೇ ಸಾಲಿನಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರುರವರಿಗೆ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ 4ನೇ ಕಂತಿನ ಅನುದಾನ **ರೂ.50.50**ಲಕ್ಷಗಳನ್ನು (ಐವತ್ತು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಿ ಆದೇಶಿಸಿದೆ.

ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ **2501–04–105–0–02–059**ಯಡಿ ಭರಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆರವರು ಗ್ರಾಆಪ–ಇಸ್–ಪಡಿ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ–2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಮೇಲು ರುಜು ಪಡೆದು, ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಿದ ಅನುದಾನವನ್ನು ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸುವುದು ಹಾಗೂ ಬಿಡುಗಡೆಯಾದ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 05 ಟಿಎಫ್‌ಪಿ 2017, ದಿನಾಂಕ 01.01.2018ರ ಆದೇಶದನ್ವಯ ಆಡಳಿತ ಇಲಾಖಾ ಮುಖ್ಯಸ್ಥರಿಗೆ ಆರ್ಥಿಕ ವಿತ್ತಾಧಿಕಾರ ಪ್ರತ್ಯಾಯೋಜಿಸಿರುವ ಮೇರೆಗೆ ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ: ಗ್ರಾಅಪ 34 ಪಿಬಿಎಸ್ 2018, ದಿನಾಂಕ 30.01.2018ರಲ್ಲಿ ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

Director (RI-II) & Ex. Officio
Joint Secretary to the Govt.
... Development & Panchayath Raj Department
Bangalore

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
3. ಜಂಟಿ ನಿರ್ದೇಶಕರು ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ.
6. ಉಪ ನಿರ್ದೇಶಕರು (ತ್ರಾಂತಿಕ), ಗ್ರಾಮೂಸೌ ಕೋಶ, ಗ್ರಾಅಪ ಇಲಾಖೆ.
7. ಉಪ ನಿರ್ದೇಶಕರು, TNMC, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
8. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪ ಇಲಾಖೆ.
9. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.

ಕರ್ನಾಟಕ ಸರ್ಕಾರ

ಗ್ರಾಅಪ 51 ಜೈಅಯೋ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ.14.02.2018.

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ,

ಉಪನಿರ್ದೇಶಕರು,
ಖಜಾನೆ ಗಣಕಜಾಲ ಕೇಂದ್ರ,
ಎರಡನೇ ಮಹಡಿ, ಖನಿಜ ಭವನ,
ಬೆಂಗಳೂರು.

ಮಾನ್ಯರೇ,

ವಿಷಯ : 2017-18ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2501ರಡಿ ಬಿಡುಗಡೆ ಮಾಡಿದ ಅನುದಾನವನ್ನು Upload ಮಾಡುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಲೆಕ್ಕ ಶೀರ್ಷಿಕೆ 2501ರಡಿ ಬಿಡುಗಡೆ ಮಾಡಿದ ಅನುದಾನವನ್ನು ಗಣಕಜಾಲದಲ್ಲಿ Upload ಮಾಡಲು ಶ್ರೀ ಮಹಾಲಿಂಗಸ್ವಾಮಿ, ಅಧೀಕ್ಷಕರು, ರವರನ್ನು ನಿಯೋಜಿಸಿದೆ ಹಾಗೂ ಸದರಿಯವರ ಮಾದರಿ ಸಹಿ ದೃಢೀಕರಿಸಿದೆ.

ದೃಢೀಕರಿಸಿದೆ

(ಮಹಾಲಿಂಗಸ್ವಾಮಿ)

ತಮ್ಮ ವಿಶ್ವಾಸಿ,

(ಎನ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

38,14-FEB-2018,0200RP0002,0200RP0002,1,2501,04,105,0,02,NP,V,059,5050000,R,U

Director (RI-II) & Ex. Officio
Joint Secretary to the Govt.
Rural Development & Panchayath Raj Department
Bangalore